# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002

***ಪತ್ರಿಕಾ ಪ್ರಕಟಣೆ*** **ದಿನಾಂಕ: 07.06.2011**

ಬನ್ನೇರುಘಟ್ಟ ರಸ್ತೆಯಲ್ಲಿ ಇತ್ತೀಚೆಗೆ ಪ್ರಮುಖ ಆಸ್ಪತ್ರೆಗಳು, ಮಾಲ್‌ಗಳು, ಅಪಾರ್ಟ್‌ಮೆಂಟ್‌ಗಳು, ವಿದ್ಯಾಸಂಸ್ಥೆಗಳು, ಮಾಹಿತಿ ತಂತ್ರಜ್ಞಾನ ಸಂಸ್ಥೆಗಳು ನಿರ್ಮಾಣಗೊಂಡಿರುವುದರಿಂದ ವಾಹನ ದಟ್ಟಣೆ ಹೆಚ್ಚಾಗಿದೆ. ಇದರಿಂದ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿದೆ. ನಾವು ಕೂಡಾ ಸಾರ್ವಜನಿಕರ ತಾಳ್ಮೆ ಪರೀಕ್ಷಿಸಿದಂತಾಗುತ್ತಿದೆ. ಆದ್ದರಿಂದ ಆದಷ್ಟು ಬೇಗನೆ ರಸ್ತೆ ಅಗಲೀಕರಣ ಕಾಮಗಾರಿಗೆ ಚಾಲನೆ ನೀಡಲಾಗುವುದೆಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ಪಾಲಿಕೆ ಆಯುಕ್ತರು ಇಂದು ನಗರದ ಜಯದೇವ ಹೃದ್ರೋಗ ಆಸ್ಪತ್ರೆಯಿಂದ ಗೊಟ್ಟಿಗೆರೆವರೆಗಿನ ಬನ್ನೇರುಘಟ್ಟ ರಸ್ತೆಯಲ್ಲಿ ಹಮ್ಮಿಕೊಳ್ಳಲಾದ ಸ್ವಚ್ಛತಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ 7 ಕಿ.ಮೀ. ಉದ್ದದ ರಸ್ತೆಯ ಎರಡು ಬದಿಯ ಚರಂಡಿಯಿಂದ ಹೂಳೆತ್ತುವುದು, ಪಾದಚಾರಿ ಮಾರ್ಗದ ಚಪ್ಪಡಿ ಕಲ್ಲುಗಳನ್ನು ಸರಿಪಡಿಸುವುದು, ಪಾದಚಾರಿ ಮಾರ್ಗದ ಮೇಲೆ ಇರುವ ಕಲ್ಲು, ಮಣ್ಣು ಮತ್ತು ಇತರೆ ತ್ಯಾಜ್ಯಗಳನ್ನು ತೆರವುಗೊಳಿಸಿ, ಸಾರ್ವಜನಿಕರ ಓಡಾಟಕ್ಕೆ ಅನುವು ಮಾಡಿಕೊಡಲಾಯಿತು. ಈ ರೀತಿಯ ಸ್ವಚ್ಛತಾ ಕಾರ್ಯಕ್ರಮಗಳು ನಿರಂತರವಾಗಿ ಹಮ್ಮಿಕೊಳ್ಳುವುದರಿಂದ ಪಾಲಿಕೆಯಲ್ಲಿ ಲಭ್ಯವಿರುವ ಸಿಬ್ಬಂದಿ ಮತ್ತು ಉಪಕರಣ, ವಾಹನಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುವುದಲ್ಲದೇ ರಸ್ತೆಗಳು ಸ್ವಚ್ಛಗೊಂಡು ಸುಂದರವಾಗಿ ಕಾಣುತ್ತವೆ ಮತ್ತು ಸಾರ್ವಜನಿಕರ ಓಡಾಟಕ್ಕೆ ಕೂಡಾ ಅನುಕೂಲವಾಗುತ್ತದೆಂದು ತಿಳಿಸಿದರು.

ತಪಾಸಣೆ ಸಂದರ್ಭದಲ್ಲಿ ಪಾಲಿಕೆ ಆಯುಕ್ತರು ಬಿಳೇಕಹಳ್ಳಿಯ ಮುಖಾಂತರ ಹಾದು ಹೋಗಿರುವ ಬೃಹತ್ ನೀರುಗಾಲುವೆಗೆ ನಿರ್ಮಿಸಲಾಗುತ್ತಿರುವ ತಡೆಗೋಡೆ ಮತ್ತು ರಸ್ತೆ ನಿರ್ಮಾಣ ಕಾಮಗಾರಿಯನ್ನು ಪರಿಶೀಲಿಸಿದರು. ಈ ಕಾಮಗಾರಿ ಕಳೆದ ಮೂರು ವರ್ಷಗಳಿಂದ ನಿರಂತರವಾಗಿ ನಡೆಯುತ್ತಿದೆ. ಜಲಮಂಡಳಿಯಿಂದ ಒಳಚರಂಡಿ ಪೈಪ್‌ಗಳನ್ನು ಅಳವಡಿಸಲು ವಿಳಂಬವಾಗಿರುವುದರಿಂದ ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಅಡಚಣೆಯಾಗುತ್ತಿದೆ. ಆದ್ದರಿಂದ ಒಳಚರಂಡಿ ಪೈಪ್‌ಗಳನ್ನು ಅಳವಡಿಸುವ ಕಾಮಗಾರಿಯನ್ನು 3 ತಿಂಗಳ ಒಳಗಾಗಿ ಪೂರ್ಣಗೊಳಿಸಲು ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ರವರಿಗೆ ಸೂಚನೆ ನೀಡಿದರು.

ತದನಂತರ ಬೃಹತ್ ನೀರುಗಾಲುವೆ ಒತ್ತುವರಿ ಮಾಡಿಕೊಂಡು 3 ಅಂತಸ್ಥಿನ ಕಟ್ಟಡ ನಿರ್ಮಾಣಗೊಂಡಿರುವುದನ್ನು ಗಮನಿಸಿದ ಆಯುಕ್ತರು, ಈ ಭಾಗದಲ್ಲಿ ಒತ್ತುವರಿಯಿಂದ ನೀರುಗಾಲುವೆ ಕಿರುದಾಗಿದ್ದು, ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪ್ರವಾಹ ಉಂಟಾಗುತ್ತಿದೆ. ಆದ್ದರಿಂದ ಈ ಕೂಡಲೇ ಈ ಕಟ್ಟಡಕ್ಕೆ ನೀಡಿದ ನಕ್ಷೆಯನ್ನು ಹಿಂದಕ್ಕೆ ಪಡೆಯಲು ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರಿಗೆ ಸೂಚನೆ ನೀಡಿದರು. ಈಗಾಗಲೇ ಉಚ್ಚ ನ್ಯಾಯಾಲಯ ಆದೇಶಿಸಿರುವಂತೆ ಬೃಹತ್ ನೀರುಗಾಲುವೆ ಒತ್ತುವರಿಯನ್ನು ತೆರವುಗೊಳಿಸುವ ಕಾರ್ಯವನ್ನು ತ್ವರಿತಗೊಳಿಸಬೇಕು. ನಾಳೆಯಿಂದಲೇ ಪ್ರತಿದಿನ ಒಂದೊಂದು ಒತ್ತುವರಿಯನ್ನು ತಪ್ಪದೇ ತೆರವುಗೊಳಿಸುವ ಕಾರ್ಯ ಕೈಗೊಳ್ಳುವಂತೆ ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ರವರಿಗೆ ಆದೇಶ ನೀಡಿದರು.

ಬೊಮ್ಮನಹಳ್ಳಿ ಶಾಸಕರಾದ ಶ್ರೀ ಸತೀಶ್ ರೆಡ್ಡಿಯವರು ಈ ಸಂದರ್ಭದಲ್ಲಿ ಮಾತನಾಡಿ, ಇವತ್ತಿನ ರಸ್ತೆ ಸ್ವಚ್ಛತೆ ಕಾರ್ಯಕ್ರಮ ಬಹಳ ಉತ್ತಮವಾಗಿ ಕೈಗೊಳ್ಳಲಾಯಿತು. ಇದರಿಂದ ರಸ್ತೆಗಳು, ಪಾದಚಾರಿ ಮಾರ್ಗಗಳು ಸ್ವಚ್ಛಗೊಂಡು ಸಾರ್ವಜನಿಕರಿಗೆ ಅನುಕೂಲವಾಗಿದೆ. ನಿರಂತರವಾಗಿ ಈ ಸ್ವಚ್ಛತಾ ಕಾರ್ಯಕ್ರಮವನ್ನು ಕೈಗೊಳ್ಳಲು ಅನುದಾನದ ಅವಶ್ಯಕತೆ ಇದೆ. ಆದ್ದರಿಂದ ಪ್ರತಿ ವಲಯಕ್ಕೆ ಅನುದಾನ ಒದಗಿಸಲು ಆಯುಕ್ತರಲ್ಲಿ ಮನವಿ ಮಾಡಿದರು. ಪಾಲಿಕೆ ಆಯುಕ್ತರು ವಲಯ ಮಟ್ಟದಲ್ಲಿ ಸ್ವಚ್ಛತಾ ಕಾರ್ಯಕ್ರಮವನ್ನು ನಿರಂತರವಾಗಿ ಹಮ್ಮಿಕೊಳ್ಳಲು ಪ್ರತಿ ವಲಯಕ್ಕೆ ವರ್ಷಕ್ಕೆ 1 ಕೋಟಿ ರೂ.ಗಳನ್ನು ಅನುದಾನ ನೀಡುವುದಾಗಿ ತಿಳಿಸಿದರು.

ಈ ಸ್ವಚ್ಛತಾ ಕಾರ್ಯಕ್ರಮದಲ್ಲಿ ಬೊಮ್ಮನಹಳ್ಳಿ ಶಾಸಕರಾದ ಶ್ರೀ ಸತೀಶ್ ರೆಡ್ಡಿ, ಬೆಂಗಳೂರು ದಕ್ಷಿಣ ಕ್ಷೇತ್ರದ ಶಾಸಕರಾದ ಶ್ರೀ ಎಂ. ಕೃಷ್ಣಪ್ಪ, ನಗರ ಯೋಜನೆ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ಸಿ.ಕೆ. ರಾಮಮೂರ್ತಿ, ಪಾಲಿಕೆ ಸದಸ್ಯರುಗಳಾದ ಶ್ರೀ ಎಲ್. ರಮೇಶ್, ಶ್ರೀಮತಿ ಎಂ. ರೂಪಾ ರಮೇಶ್, ಶ್ರೀ ಎಂ. ಶ್ರೀನಿವಾಸ್, ಶ್ರೀ ಎಂ. ಪುರುಷೋತ್ತಮ್, ಶ್ರೀಮತಿ ಹೆಚ್.ಕೆ. ಪುಷ್ಪಾ, ಮುಂತಾದವರು ಹಾಜರಿದ್ದು, ಶ್ರಮದಾನ ಮಾಡಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**